153 ಸಂ6 ದಿ-72 (99) 4/ಜು

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಟಿ.ಎನ್. ಜವರಾಯಿ ಗೌಡ ಇವರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಹೇಳಿಕೆ**

**ಸೂಚನೆ:-**

ರಾಜ್ಯದಲ್ಲಿ ಬಗರ್ ಹುಕುಂ ಮೂಲಕ ರೈತರು ಅನೇಕ ವರ್ಷಗಳಿಂದ ಸರ್ಕಾರಿ ಜಮೀನುಗಳಲ್ಲಿ ಸಾಗುವಳಿ ಮಾಡಿಕೊಂಡು ಬಂದಿರುತ್ತಾರೆ. ಈ ರೈತರು ಈಗಾಗಲೇ ಸರ್ಕಾರಕ್ಕೆ ಅರ್ಜಿ ನಮೂನೆ ಸಂಖ್ಯೆ 50, 51, 52 ಮತ್ತು ಅಂತಿಮವಾಗಿ 53ನ್ನು ಸಲ್ಲಿಸಿ ಸಾಗುವಳಿ ಚೀಟಿ ಪಡೆಯುವ ಸಲುವಾಗಿ ಜಾತಕ ಪಕ್ಷಿಗಳಂತೆ ಕಾಯುತ್ತಿದ್ದರು ಸಹ ರಾಜ್ಯದ 31 ಜಿಲ್ಲೆಗಳಲ್ಲಿ ಬಹಳಷ್ಟು ರೈತರಿಗೆ ಸಾಗುವಳಿ ಚೀಟಿಯನ್ನು ನೀಡಿರುವುದಿಲ್ಲ. ಇದರಿಂದ ರೈತರು ಯಾವುದೇ ಸಹಕಾರಿ ಬ್ಯಾಂಕುಗಳಲ್ಲಿ ಸಾಲ ಪಡೆಯುವುದಾಗಲಿ ಸಾಗುವಳಿ ಜಮೀನುಗಳಲ್ಲಿ ಕೊಳವೆ ಬಾವಿಗಳನ್ನು ತೆಗೆಸಿ ಬೇಸಾಯ ಮಾಡುವುದಕ್ಕೆ ಸಾಧ್ಯವಾಗಿರುವುದಿಲ್ಲ ಅನೇಕ ತಾಲ್ಲೂಕುಗಳಲ್ಲಿ ಬಗರ್ ಹುಕುಂ ಕಮಿಟಿಗಳನ್ನು ರಚನೆ ಮಾಡಿರುವುದಿಲ್ಲ, ಮಾಡಿದ್ದರು ಸಹ ಸದರಿ ಕಮಿಟಿಗಳ ಸಭೆ ನಡೆಯುತ್ತಿಲ್ಲ ಅಲ್ಲದೇ ರಾಜ್ಯದಲ್ಲಿ ಇಲ್ಲಿಯ ತನಕ ಅರ್ಜಿ ಸಲ್ಲಿಸಿರುವ ರೈತರ ಸಂಖ್ಯೆ ಎಷ್ಟು ಯಾವ ಯಾವ ಜಿಲ್ಲೆಗಳಲ್ಲಿ ಇಂತಹ ಜಮೀನುಗಳನ್ನು ಮಂಜೂರು ಮಾಡಲು ಬಾಕಿ ಇದೆ ನಿಗದಿತ ಕಾಲ ಮಿತಿಯೊಳಗೆ ಈ ಸಾಗುವಳಿ ಚೀಟಿಗಳನ್ನು ಮಂಜೂರು ಮಾಡಿಕೊಡಲಾಗುವುದೇ ಎಂಬ ಬಗ್ಗೆ ಸರ್ಕಾರ ಸ್ಪಷ್ಟಪಡಿಸಬೇಕು ಹಾಗೂ ಬೆಂಗಳೂರು ನಗರ ಜಿಲ್ಲೆಯ ಯಾವ ಯಾವ ತಾಲ್ಲೂಕುಗಳ ಸರ್ಕಾರಿ ಜಮೀನುಗಳಲ್ಲಿ ರೈತರು ಎಷ್ಟು ವರ್ಷಗಳಿಂದ ಸಾಗುವಳಿ ಮಾಡುತ್ತಿದ್ದಾರೆ ಇಲ್ಲಿಯ ತನಕ ಎಷ್ಟು ಜನರಿಗೆ ಸಾಗುವಳಿ ಚೀಟಿ ನೀಡಲಾಗದೆ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ಎಂಬುದರ ಬಗ್ಗೆ ಸರ್ಕಾರ ವಿವರವಾದ ಮಾಹಿತಿ ನೀಡುವುದರ ಜೊತೆಗೆ ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯಿಂದ ಮತ್ತು ಬಿಬಿಎಂಪಿ ಬಾರ್ಡರ್‌ನ ಎಷ್ಟು ಕಿ.ಮಿ. ಅಂತರದಲ್ಲಿ ಸರ್ಕಾರಿ ಜಮೀನುಗಳಲ್ಲಿ ಸಾಗುವಳಿ ಮಾಡುತ್ತಿರುವ ರೈತರಿಗೆ ಯಾವ ಮಾನದಂಡವನ್ನು ಅನುಸರಿಸಿ ಸಾಗುವಳಿ ಚೀಟಿಗಳನ್ನು ನೀಡಲಾಗುತ್ತಿದೆ ಎಂದು ನಿಯಮ 72ರ ಅಡಿಯಲ್ಲಿ ಸರ್ಕಾರದ ಗಮನ ಸೆಳೆಯಲು ಬಯಸುತ್ತೇನೆ.

* * * *

**ಹೇಳಿಕೆ:-**

ಸರ್ಕಾರಿ ಜಮೀನುಗಳಲ್ಲಿ ಅನಧಿಕೃತವಾಗಿ ಮಾಡುತ್ತಿರುವ ಸಾಗುವಳಿಯನ್ನು ಸಕ್ರಮಗೊಳಿಸಲು ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94ಎ, 94ಬಿ ಹಾಗೂ 94ಎ(4)ರಡಿ ಕ್ರಮವಾಗಿ ನಮೂನೆ 50, 53 ಹಾಗೂ 57ರಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ಸ್ವೀಕರಿಸಿದ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಅರ್ಹ ಅರ್ಜಿಗಳನ್ನು ಬಗರ್ ಹುಕು ಸಾಗುವಳಿ ಸಕ್ರಮೀಕರಣ ಸಮಿತಿಯ ಮುಂದೆ ಮಂಡಿಸಿ ಅರ್ಹ ಫಲಾನುಭವಿಗಳಿಗೆ ಸಾಗುವಳಿ ಚೀಟಿಯನ್ನು ನೀಡಲಾಗುತ್ತಿದೆ. ಅನರ್ಹ ಅರ್ಜಿಗಳನ್ನು ತಿರಸ್ಕರಿಸಲು ಜಿಲ್ಲಾಧಿಕಾರಿಯರಿಗೆ ಅಧಿಕಾರವಿರುತ್ತದೆ. ರಾಜ್ಯದಲ್ಲಿ ಬಗರ್ ಹಕುಂ ಸಾಗುವಳಿ ಸಮಿತಿಯಿಂದ ಮಂಜೂರಾದ ಪ್ರಕರಣಗಳ ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ನೀಡಲಾಗಿದೆ. ಈ ಬಗ್ಗೆ ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ. 45 ಎಲ್.ಜಿ.ಪಿ. 2023, ದಿನಾಂಕ: 01.12.2023ರಲ್ಲಿ ಜಿಲ್ಲಾಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲಾಗಿದ್ದು, ಅದರಂತೆ ಸಾಗುವಳಿ ಚೀಟಿ ವಿತರಿಸಲು ಕ್ರಮವಹಿಸಲಾಗುತ್ತಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪರಿಮಿತಿಗಳಿಂದ 18 ಕಿ.ಮೀ. ಅಂತರದೊಳಗೆ ಬರುವ ಜಮೀನುಗಳನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲ.

ಸಂಖ್ಯೆ:ಆರ್.ಡಿ. 155 ಎಲ್.ಜಿ.ಕ್ಯೂ. 2025

**(ಕೃಷ್ಣ ಬೈರೇಗೌಡ)**
**ಕಂದಾಯ ಸಚಿವರು**